## ಉದಯಪುರದಲ್ಲಿ ನಡೆದ 9ನೇ ಕಾಮನವೆಲ್ತ್ ಸಂಸದೀಯ ಸಮ್ಮೇಳನದಲ್ಲಿ ಕರ್ನಾಟಕದ ಪ್ರತಿನಿಧಿಗಳು



ರಾಜಸ್ಥಾನ ರಾಜ್ಯದ ಉದಯಪುರದಲ್ಲಿ ನಡೆಯುತ್ತಿರುವ ಆಗಸ್ಟ್ 21ರಿಂದ 23 ವರೆಗೆ 3 ದಿನಗಳ ಕಾಮನ್‌ವೆಲ್ತ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಕರ್ನಾಟಕ ರಾಜ್ಯದ ಪ್ರತಿನಿಧಿಗಳಾಗಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ್ ಹೊರಟ್ಟಿ, ವಿಧಾನಸಭೆ ಅಧ್ಯಕ್ಷರಾದ ಯು ಟಿ ಖಾದರ್, ರಾಜ್ಯ ವಿಧಾನ ಪರಿಷತ್ತಿನ ಉಪ ಸಭಾಪತಿಗಳಾದ ಎಂಕೆ ಪ್ರಾಣೇಶ್ ಅಧಿಕಾರಿ ವೃಂದದ ಪರವಾಗಿ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮೀ, ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ. ಸೇರಿದಂತೆ ಮುಂತಾದವರು ಭಾಗವಹಿಸಿದ್ದರು. ಈ ಸಮಾವೇಶದಲ್ಲಿ ರಾಜ್ಯದ ಸಭಾಧ್ಯಕ್ಷರು, ಉಪಸಭಾಧ್ಯಕ್ಷರು ಸಭಾಪತಿಗಳು, ಉಪಸಭಾಪತಿಗಳು ಆಯಾ ರಾಜ್ಯದ ಪ್ರಮುಖ ಅಧಿಕಾರಿ ವೃಂದದವರು ಭಾಗವಹಿಸಿದ್ದಾರೆ. ದೇಶದ ಪ್ರಗತಿ ಹಾಗೂ ಅಭಿವೃದ್ಧಿಯ ಮುನ್ನೋಟವು ಪ್ರಜಾಪ್ರಭುತ್ವದ ಪರಿಣಾಮಕಾರಿ ಚಟುವಟಿಕೆಗಳ ಮೇಲೆ ಅವಲಂಬಿತವಾಗಿರುವ ವಿಷಯ ಹಾಗೂ ಜನಪ್ರತಿನಿಧಿಗಳ ಹೊಣೆಗಾರಿಕೆ ಕುರಿತು ಚಿಂತನ ಮಂಥನ ನಡೆಯಲಿದೆ.

ಏಳಿಗೆಗಾಗಿ ನಮ್ಮ ಸಂವಿಧಾನದಲ್ಲಿ ಸಂಸದೀಯ ಮೌಲ್ಯಗಳನ್ನು ರೂಪಿಸಲಾಗಿದೆ ಇದು ಇಂದಿನ ಆಧುನಿಕ ವಿಚಾರವೆನಿಸಿದರೂ ಈ ವೈಜ್ಞಾನಿಕ ಪರಿಕಲ್ಪನೆಯು 12ನೇ ಶತಮಾನದಲ್ಲಿಯೇ ಕರ್ನಾಟಕದಲ್ಲಿ ಬೀಜಾಕುಂರವಾಗಿರುವುದು ಅಭಿಮಾನದ ಸಂಗತಿ. ಜನಸಾಮಾನ್ಯರ ಬದುಕಿಗೆ ಧ್ವನಿಯಾದ ಜಗಜ್ಯೋತಿ ಬಸವೇಶ್ವರರು ಪ್ರತಿಪಾಧಿಸಿದ ಅದರ್ಶ ನೈತಿಕ ಮೌಲ್ಯಗಳೇ ಪ್ರಜಾಪ್ರಭುತ್ವದ ಪರಿಕಲ್ಪನೆಗೆ ಅಡಿಪಾಯ ಒದಗಿಸಿವೆ ಎಂದು ಹೊರಟ್ಟಿ ಅವರು ತಿಳಿಸಿದರು.

ಪ್ರಜಾಪ್ರಭುತ್ವದ ಸಾರ್ಥಕತೆಯಲ್ಲಿ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಜನರ ಸಂಕಷ್ಟ, ಬವಣೆಗಳ ಧ್ವನಿಗೆ ಜನಪ್ರತಿನಿಧಿಗಳು ಕಿವಿಯಾದಾಗ ಮಾತ್ರ ಪ್ರಜಾಪ್ರಭುತ್ವಕ್ಕೆ ನೈಜ ಅರ್ಥ ಬರುತ್ತದೆ. ಜನರ ಮಾನವೀಯ ಅಗತ್ಯತೆಗಳನ್ನು ಕಾನೂನಿನ ಚೌಕಟ್ಟಿಗೆ ತರುವುದೇ ಶಾಸನ ರಚನೆ ಆಗಿದ್ದು, ಈ ಹಂತದಲ್ಲಿ ಕಾರ್ಯಾಂಗ ಮತ್ತು ಶಾಸಕಾಂಗಳೆರಡು ರಥದ ಜೋಡಿ ಗಾಲಿಗಳ ಹಾಗೆ ಚಲಿಸಿದರೆ ಮಾತ್ರ ಪ್ರಜಾಪ್ರಭುಯತ್ವ ಯಶಸ್ವಿಯಾಗುತ್ತದೆ. ಪ್ರಜಾಪ್ರಭುತ್ವದ ಮುಖ್ಯ ಉದ್ದೇಶಗಳನ್ನು ಅತ್ಯಂತ ದಕ್ಷ ಹಾಗೂ ಪರಿಪೂರ್ಣ ನೆಲೆಗಳಲ್ಲಿ ಈಡೇರಿಸಲು ಇರುವ ಏಕೈಕ ವೇದಿಕೆ ಎಂದರೆ ಉಭಯ ಮಂಡಲದ ಸದನಗಳು ಎಂದು ಹೊರಟ್ಟಿ ಬಣ್ಣಿಸಿದರು.

ದೇಶದ ಉನ್ನತಿಯಲ್ಲಿ ಜನಪ್ರತಿನಿಧಿಗಳ ಪಾತ್ರ ಹಾಗೂ ನಡವಳಿಕೆ ಕುರಿತು ತಮ್ಮ ನಾಲ್ಕು ದಶಕಗಳ ಅನುಭವವನ್ನು ಮೆಲುಕು ಹಾಕಿದ ಶ್ರೀ ಬಸವರಾಜ ಹೊರಟ್ಟಿ ಜಾತಿ, ಧರ್ಮ ಲಿಂಗಗಳ ಭೇದವಿಲ್ಲದೆ ಜನರ ಅರ್ಶೀವಾದದಿಂದ ಜನಪ್ರತಿನಿಧಿಯಾಗುವ ಅವಕಾಶವನ್ನು ಪ್ರಜಾಪ್ರಭುತ್ವ ಕಲ್ಪಿಸಿಕೊಟ್ಟಿದ್ದು, ಇಂತಹ ಪವಿತ್ರ ಸನ್ನಿವೇಶದಲ್ಲಿ ಜನರ ಬೇಕು ಬೇಡಗಳ, ದುಖಃ ದುಮ್ಮಾನಗಳನ್ನು ಆಲಿಸುವ, ಚರ್ಚಿಸುವ, ನಿರ್ವಹಿಸುವ ಔದಾರ್ಯವನ್ನು ಪ್ರತಿಯೊಬ್ಬ ಜನಪ್ರತಿನಿಧಿಯು ತೋರಬೇಕು. ಪಕ್ಷಬೇಧ ಮರೆತು ಪರಸ್ಪರ ವಿಶ್ವಾಸಾರ್ಹತೆಯಿಂದ ವರ್ತಿಸಿ ಎಲ್ಲಾ ಜನಪ್ರತಿನಿಧಿಗಳು ನಾಡಿನ ಹಾಗೂ ದೇಶದ ಅಭ್ಯುದಯಕ್ಕೆ ಕಟಿಬದ್ಧರಾಗುವ ಅವಶ್ಯಕತೆಯಿದೆ. ಸಂಸದೀಯ ಮೌಲ್ಯಗಳನ್ನು ಇನ್ನಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಚಿಂತನೆ ನಡೆಸಿ ಅವುಗಳ ಕಾರ್ಯರೂಪಕ್ಕೆ ಪರಿಣಾಮಕಾರಿಯಾಗಿ ಕ್ರಮ ಕೈಗೊಳ್ಳುವುದು ನಮ್ಮೆಲ್ಲರ ಆಧ್ಯತೆಯಾಗಬೇಕಿದೆ. ಜನರಿಂದ ಆಯ್ಕೆಯಾದ ಪ್ರತಿಯೊಬ್ಬ ಪ್ರತಿನಿಧಿಯು ನಿರ್ದಿಷ್ಟ ನೀತಿ ಸಂಹಿತೆಯನ್ನು ಅಳವಡಿಸಿಕೊಳ್ಳುವ ಮೂಲಕ ನಮ್ಮ ಪೂರ್ವಿಕ ಸಂಸದೀಯ ಪಟುಗಳ ಹೆಜ್ಜೆಗುರುತುಗಳಲ್ಲಿರುವ ತತ್ವಾದರ್ಶ ಮೌಲ್ಯಗಳನ್ನು ಸಕಾಲಿಕ ವಿವೇಕದೊಂದಿಗೆ ಗ್ರಹಿಸಿ ಅವುಗಳನ್ನು ಕಾರ್ಯರೂಪಗೊಳಿಸುವ ಸಂಕಲ್ಪ ಮಾಡಬೇಕಾಗಿರುವುದು ಇಂದಿನ ತುರ್ತು ಅವಶ್ಯಕತೆಯಾಗಿದೆ ಎಂದು ಬಸವರಾಜ ಹೊರಟ್ಟಿ ತಿಳಿಸಿದರು.

ಮೂರು ದಿನಗಳ ಕಾಲ ನಡೆಯುವ ಸಮ್ಮೇಳನದಲ್ಲಿ ದೇಶದ ಎಲ್ಲಾ ರಾಜ್ಯಗಳ ವಿಧಾನ ಸಭೆಯ ಸಭಾಧ್ಯಕ್ಷರು ಉಪಸಭಾಧ್ಯಕ್ಷರುಗಳು ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ಉಪಸಭಾಪತಿಗಳು ಭಾಗವಹಿಸಿದ್ದಾರೆ. ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜಸ್ಥಾನದ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್, ರಾಜ್ಯಸಭೆಯ ಉಪಸಭಾಪತಿ ಹರಿವಂಶ, ರಾಜಸ್ಥಾನದ ವಿಧಾನಸಭಾಧ್ಯಕ್ಷ ಸಿ.ಪಿ ಜೋಷಿ ಕರ್ನಾಟಕದ ಪ್ರತಿನಿಧಿಗಳಾದ ವಿದಾನಸಭಾಧ್ಯಕ್ಷರಾದ ಯು.ಟಿ.ಖಾದರ, ವಿದಾನಪರಿಷತ್ತಿನ ಉಪ ಸಭಾಪತಿಗಳಾದ ಎಂ.ಕೆ.ಪ್ರಾಣೇಶ, ಅಧಿಕಾರಿ ವೃಂದದ ಪರವಾಗಿ ಭಾಗವಹಿಸಿದ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮೀ ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ. ಸೇರಿದಂತೆ ರಾಜಸ್ಥಾನದ ಶಾಸಕರು, ಸಂಸದರು ಸಮಾರಂಭದಲ್ಲಿ ಭಾಗವಹಿಸಿದ್ದರು.